739 ಶ್ರೀ ಖಾಜಿ ಅರಶದ ಅಲಿ : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರದ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಗೆ ಎಂಟು ಅಧೀಕ್ಷಕರ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಾ॥ ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಹೌದು, ಸರ್ಕಾರದ ಪರಿಶೀಲನೆಯಲ್ಲಿದೆ.

Yes, Under consideration of the Government.

ಪ್ರವಾಸೋದ್ಯಮ ಪಟ್ಟಿಯಲ್ಲಿ ಹೆಸರು ಪಡೆದಿರುವುದು

775 ಶ್ರೀ ಬಂಡೆಪ್ಪ ಕಾಶ್ಯಂಪೂರ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲಾ ಕೇಂದ್ರ ಪ್ರವಾಸೋದ್ಯಮ ಪಟ್ಟಿಯಲ್ಲಿ ಹೆಸರು ಪಡೆದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಪ್ರವಾಸೋದ್ಯಮ ಸೇರಿಸಲಾಗಿದೆ;

ಇ) ಪ್ರವಾಸಿ ಸ್ಥಳಗಳನ್ನಾಗಿ ಯಾವ ಯಾವ ಪ್ರದೇಶಗಳನ್ನು ಗುರುತಿಸಲಾಗಿದೆ;

ಈ) ಪ್ರವಾಸಿ ಸ್ಥಳಗಳನ್ನಾಗಿ ಗುರುತಿಸಿರುವ ಪ್ರದೇಶಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

ಉ) ಹಾಗಿದ್ದಲ್ಲಿ, ಯಾವ ಯಾವ ಪ್ರದೇಶಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ;

ಊ) ಬೀದರ್ ಜಿಲ್ಲೆಯ ಪ್ರವಾಸಿ ಸ್ಥಳಗಳ ಅಭಿವೃದ್ಧಿಗಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು;

ಋ) ನಿಗದಿಪಡಿಸಿದ ಅನುದಾನದಲ್ಲಿ ಎಷ್ಟು ವೆಚ್ಚವಾಗಿದೆ ಮತ್ತು ಎಷ್ಟು ಉಳಿಕೆಯಾಗಿದೆ;

ಎ) ಬೀದರ್ ಜಿಲ್ಲೆಯ ಬೇರೆ ಯಾವುದಾದರೂ ಸ್ಥಳಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಏ) ಹಾಗಿದ್ದಲ್ಲಿ, ಆ ಪ್ರದೇಶಗಳು ಯಾವುವು; (ವಿವರಗಳನ್ನು ನೀಡುವುದು);